## ದಿನಾಂಕ: 24/06/2021 ರ ನೋಡಲ್ ಅಧಿಕಾರಿ ಅಧ್ಯಕ್ಷತೆಯಲ್ಲಿ ನಡೆದ ವಾರ್ಡ್ ಸಂಖ್ಯೆ-109 ಚಿಕ್ಕಪೇಟೆ ವಾರ್ಡಿನ ವಾರ್ಡ್ ಸಮಿತಿ ಸಭೆಯ ನಡವಳಿಗಳು

### ಸಭೆಯಲ್ಲಿ ಹಾಜರಿದ್ದ ಅಧಿಕಾರಿಗಳ ಮತ್ತು ಸದಸ್ಯರುಗಳ ವಿವರಗಳು:

| ಕ್ರ.ಸಂ. | ಅಧಿಕಾರಿ/ ನೌಕರರ ಹೆಸರು | ಪದನಾಮ |
|---|---|---|
| 1 | ಶ್ರೀ. ಎಂ.ಎಸ್. ಉಮೇಶ್ | ಅಧ್ಯಕ್ಷರು ಮತ್ತು ನೋಡಲ್ ಅಧಿಕಾರಿ |
| 2 | ಶ್ರೀ. ಮೋಹನ್ | ಸಂಚಾಲಕರು ಮತ್ತು ಸಹಾಯಕ ಅಭಿಯಂತರರು, ವಾರ್ಡ್ ಸಂಖ್ಯೆ-109 |
| 3 | ಶ್ರೀ. ಗೋವರ್ಧನ .ಕೆ | ಕಂದಾಯ ವಸೂಲಿಗಾರರು, ವಾರ್ಡ್ ಸಂಖ್ಯೆ: 109 |
| 4 | ಶ್ರೀ. ಸತೀಶ್ ಕುಮಾರ್.ಎ | ಕಿರಿಯ ಅಭಿಯಂತರರು (I/c) |
| 5 | ಶ್ರೀ. ವೆಂಕಟರಾಮ | ಕಿರಿಯ ಆರೋಗ್ಯ ಪರಿವೀಕ್ಷಕರು, ವಾರ್ಡ್ ಸಂಖ್ಯೆ: 109 |
| 6 | ಶ್ರೀ. ಮಂಜುನಾಥ್ | ಕೆಲಸ ಪರಿವೀಕ್ಷಕರು BWSSB |
| 7 | ಶ್ರೀ. ಶಿವಾನಂದ್ | PC-17951 |
| 8 | ಶ್ರೀ. ವೆಂಕಪ್ಪ | ಹೆಡ್‌ಕಾನ್ಸ್‌ಟೇಬಲ್-6561 |
| 9 | ಶ್ರೀ. ಭಾರ್ಗವ್ ಎಸ್ | ಮಾರ್ಷಲ್ |
| 10 | ಶ್ರೀ. ಅಸ್ಲಾಮ್ ಪಾಷ | ವಾರ್ಡ್ ಸದಸ್ಯರು |

ವಾರ್ಡ್ ಸಮಿತಿಯ ಉದ್ದೇಶ ಮತ್ತು ಸಭೆಯ ಮಹತ್ವವನ್ನು ತಿಳಿಸಿ ಸಭೆಯಲ್ಲಿ ಉಪಸ್ಥಿತರಿದ್ದ ಅಧ್ಯಕ್ಷರು, ಸದಸ್ಯರು ಹಾಗೂ ಎಲ್ಲಾ ಅಧಿಕಾರಿಗಳನ್ನು ಸ್ವಾಗತಿಸಿ ಸಭೆಯನ್ನು ಪ್ರಾರಂಭಿಸಲಾಯಿತು.

1. ಹಿಂದಿನ ಸಭೆಯ ನಡವಳಿಗಳಲ್ಲಿದ್ದ ವಿಷಯಕ್ಕೆ ತೆಗೆದುಕೊಂಡ ಕ್ರಮದ ಬಗ್ಗೆ ಓದಿ ರೆಕಾರ್ಡ್ ಮಾಡಲಾಯಿತು. ದಾಖಲಿಸಲಾದ ವಿಷಯಗಳಲ್ಲಿ ಬಾಕಿ ಉಳಿದಿರುವ ಕೆಲಸ ಕಾರ್ಯಗಳನ್ನು ಜರೂರಾಗಿ ಕ್ರಮವಹಿಸುವಂತೆ ಸಂಬಂಧಿಸಿದವರಿಗೆ ಸೂಚಿಸಲಾಯಿತು.

2. ಇಂದಿನ ಸಭೆಯಲ್ಲಿ ಮಾನ್ಯ ಅಧ್ಯಕ್ಷರ ಸಮ್ಮುಖದಲ್ಲಿ ಚರ್ಚಿಸಿದ ವಿಷಯಗಳು:

| ಕ್ರ ಸಂ | ವಿಷಯಗಳು | ನಿರ್ಣಯ | ಕ್ರಮ ತೆಗೆದುಕೊಳ್ಳಬೇಕಾದ ಅಧಿಕಾರಿ |
|---|---|---|---|
| 1 | ವಾರ್ಡ್ ವ್ಯಾಪ್ತಿಯಲ್ಲಿ ಕೋವಿಡ್ ಲಸಿಕೆ 18 ವರ್ಷ ಮೇಲ್ಪಟ್ಟ ಸಾರ್ವಜನಿಕರಿಗೆ ಲಸಿಕೆ ನೀಡುವ ಬಗ್ಗೆ | ಕೋವಿಡ್ ಲಸಿಕೆ 18 ವರ್ಷ ಮೇಲ್ಪಟ್ಟ ವಾರ್ಡ್ ವ್ಯಾಪ್ತಿಯಲ್ಲಿ ಜಾಗೃತಾ ಕಾರ್ಯಕ್ರಮಗಳನ್ನು ಏರ್ಪಡಿಸಿ ಸಾರ್ವಜನಿಕರಲ್ಲಿ ಲಸಿಕೆ ಉಪಯೋಗಗಳ ಬಗ್ಗೆ ಜಾಗೃತಿ ಮೂಡಿಸಿ ಲಸಿಕೆ ಪಡೆಯುವಂತೆ ತಿಳಿಸಲು ಅಗತ್ಯ ಕ್ರಮ ಕೈಗೊಳ್ಳುವಂತೆ ಸಭೆಯಲ್ಲಿ ಸೂಚಿಸಲಾಯಿತು. | ಆರೋಗ್ಯ ವೈದ್ಯಾಧಿಕಾರಿ, ಚಿಕ್ಕಪೇಟೆ |
| 2 | ವಾರ್ಡ್ ವ್ಯಾಪ್ತಿಯಲ್ಲಿ ಮಾಂಸಮಳಿಗೆ ವ್ಯಾಪಾರಸ್ಥರು ಮಳಿಗೆಗಳಲ್ಲಿ ಉತ್ಪತ್ತಿಯಾಗುವ ಜೈವಿಕತ್ಯಾಜ್ಯಗಳನ್ನು ರಾಜಕಾಲುವೆಯಲ್ಲಿ ವಿಲೇವಾರಿ ಮಾಡುವುದನ್ನು ತಡೆಗಟ್ಟುವ ಬಗ್ಗೆ | ಈ ಬಗ್ಗೆ ಸಭೆಯಲ್ಲಿ ಪಶುಪಾಲನಾ ವಿಭಾಗ ಅಧಿಕಾರಿಗಳೊಂದಿಗೆ ಸಭೆ ನಡೆಸಿ ಜೈವಿಕ ತ್ಯಾಜ್ಯವನ್ನು ವೈಜ್ಞಾನಿಕ ರೀತಿಯಲ್ಲಿ ವಿಲೇವಾರಿ ಮಾಡಲು ಅಗತ್ಯ ಕ್ರಮ ಕೈಗೊಳ್ಳುವಂತೆ ತಿಳಿಸಲಾಯಿತು. | ಸಹಾಯಕ ಕಾರ್ಯಪಾಲಕ ಅಭಿಯಂತರರು ಚಿಕ್ಕಪೇಟೆ, ಸಹಾಯಕ ಅಭಿಯಂತರರು ವಾರ್ಡ್:109 |

...ಪ್ರ.ತಿ.ನೋ

Scanned by CamScanner

| | | | |
|---|---|---|---|
| 3 | ವಾರ್ಡ್ ವ್ಯಾಪ್ತಿಯಲ್ಲಿ ಸಂಗ್ರಹಣೆಗೊಂಡಿರುವ ಡೆಬ್ರೀಸ್‌ನ್ನು ತೆರವುಗೊಳಿಸುವ ಬಗ್ಗೆ. | ಈ ಬಗ್ಗೆ ಸಭೆಯಲ್ಲಿ ಚರ್ಚಿಸಿ ಡೆಬ್ರೀಸ್‌ನ್ನು ತೆರವುಗೊಳಿಸುವ ಕಾರ್ಯಾಚರಣೆ ಪ್ರಗತಿಯಲ್ಲಿದ್ದು, ಉಳಿದ ಡೆಬ್ರೀಸ್‌ನ್ನು ಅತಿ ಜರೂರಾಗಿ ತೆರವುಗೊಳಿಸಲು ಕ್ರಮವಹಿಸುವುದಾಗಿ ತಿಳಿಸಲಾಯಿತು. | ಸಹಾಯಕ ಕಾರ್ಯಪಾಲಕ ಅಭಿಯಂತರರು ಚಿಕ್ಕಪೇಟೆ, ಸಹಾಯಕ ಅಭಿಯಂತರರು ವಾರ್ಡ್:109 |
| 4 | ಚಿಕ್ಕಪೇಟೆ ಮುಖ್ಯರಸ್ತೆಯಲ್ಲಿ ಪಾರ್ಕಿಂಗ್ ಬಗ್ಗೆ. | ಈ ಬಗ್ಗೆ ಸಭೆಯಲ್ಲಿ ಚರ್ಚಿಸಿ ಚಿಕ್ಕಪೇಟೆ ಮುಖ್ಯಸ್ತೆಯಲ್ಲಿ ವಾಹನಗಳ ಪಾರ್ಕಿಂಗ್ ನ್ನು ಸಮ ಬೆಸ ಮಾದರಿಯಲ್ಲಿ ಅಳವಡಿಸಲು ಪೊಲೀಸ್ ಸಂಚಾರಿ ಇಲಾಖೆಗೆ ಪತ್ರ ಬರೆದು ಈ ಬಗ್ಗೆ ಅಗತ್ಯ ಕ್ರಮ ಕೈಗೊಳ್ಳುವಂತೆ ತಿಳಿಸಲು ಸೂಚಿಸಲಾಯಿತು. | ಸಹಾಯಕ ಕಾರ್ಯಪಾಲಕ ಅಭಿಯಂತರರು ಚಿಕ್ಕಪೇಟೆ, ಸಹಾಯಕ ಅಭಿಯಂತರರು ವಾರ್ಡ್:109, ಪೊಲೀಸ್ ಸಂಚಾರಿ ವಿಭಾಗ |
| 5 | ವಾರ್ಡ್ ವ್ಯಾಪ್ತಿಯಲ್ಲಿ ಸಣ್ಣ ಕೈಗಾರಿಕಾ ಕಂಪನಿಗಳಿಗೆ ಮತ್ತು Mutton & Beaf Stall ಗಳಿಗೆ ನೋಟೀಸ್ ನೀಡುವ ಬಗ್ಗೆ. | ಸಭೆಯಲ್ಲಿ ವಾರ್ಡ್ ವ್ಯಾಪ್ತಿಯಲ್ಲಿ ಸಣ್ಣ ಕೈಗಾರಿಕಾ ಉದ್ಯಮಗಳು ಮತ್ತು Mutton & Beaf Stall ಗಳಿಂದ ಉತ್ಪತ್ತಿಯಾಗುವ ತ್ಯಾಜ್ಯವನ್ನು ನಿಯಾಮಾನುಸಾರ ವಿಲಾಎವಾರಿ ಮಾಡದೆ ಅನಧೀಕೃತವಾಗಿ ವಾರ್ಡ್ ವ್ಯಾಪ್ತಿಯ ರಸ್ತೆಗಳಲ್ಲಿ ವಿಲೇವಾರಿ ಮಾಡುತ್ತಿರುವ ಬಗ್ಗೆ ಸಭೆಯಲ್ಲಿ ಸಾರ್ವಜನಿಕರು ದೂರುಗಳು ನೀಡಿರುವುದರಿಂದ ಸಣ್ಣ ಕೈಗಾರಿಕಾ ಉದ್ಯಮಗಳು ಮತ್ತು Mutton & Beaf Stall ಗಳ ಮಾಲೀಕರಿಗೆ ಆರೋಗ್ಯ ವೈದ್ಯಾಧಿಕಾರಿಗಳ ಮೂಲಕ ನೋಟೀಸ್ ಜಾರಿ ಮಾಡುವಂತೆ ಸಭೆಯಲ್ಲಿ ತಿಳಿಸಲಾಯಿತು. | ಆರೋಗ್ಯ ವೈದ್ಯಾಧಿಕಾರಿ (ಚಿಕ್ಕಪೇಟೆ) |

ಮೇಲ್ಕಂಡ ಎಲ್ಲಾ ವಿಷಯಗಳೊಂದಿಗೆ ಕಾರ್ಯದರ್ಶಿಗಳು ಸಭೆಯನ್ನು ವಂದನಾರ್ಪಣೆಗಳೊಂದಿಗೆ ಮುಕ್ತಾಯಗೊಳಿಸಲಾಯಿತು.

ಕಾರ್ಯದರ್ಶಿ ಮತ್ತು
ಸಹಾಯಕ ಅಭಿಯಂತರರು

ಅಧ್ಯಕ್ಷರು &
ನೋಡಲ್ ಅಧಿಕಾರಿ

Scanned by CamScanner

ಪ್ರತಿಯನ್ನು:-

1. ಮಾನ್ಯ ಆಡಳಿತಾಧಿಕಾರಿ, ಬಿಬಿಎಂಪಿ ರವರ ಅವಗಾಹನೆಗೆ ಸಲ್ಲಿಸಿದೆ.
2. ಮಾನ್ಯ ಆಯುಕ್ತರು, ಬಿಬಿಎಂಪಿ ರವರ ಅವಗಾಹನೆಗೆ ಸಲ್ಲಿಸಿದೆ.
3. ಮಾನ್ಯ ಜಂಟಿ ಆಯುಕ್ತರು (ಪಶ್ಚಿಮ) ಬಿಬಿಎಂಪಿ ರವರ ಅವಗಾಹನೆಗೆ ಸಲ್ಲಿಸಿದೆ.
4. ಮಾನ್ಯ ಮುಖ್ಯ ಅಭಿಯಂತರರು (ಪಶ್ಚಿಮ) ಬಿಬಿಎಂಪಿ ರವರ ಅವಗಾಹನೆಗೆ ಸಲ್ಲಿಸಿದೆ.
5. ನೋಡಲ್ ಅಧಿಕಾರಿ, ವಾರ್ಡ್ ಸಂಖ್ಯೆ: 109 ಚಿಕ್ಕಪೇಟೆ ರವರ ಅವಗಾಹನೆಗೆ ಸಲ್ಲಿಸಿದೆ.
6. ಕಾರ್ಯಪಾಲಕ ಅಭಿಯಂತರರು, ಚಿಕ್ಕಪೇಟೆ ವಿಭಾಗ ರವರ ಅವಗಾಹನೆಗೆ ಸಲ್ಲಿಸಿದೆ.
7. ಕಾರ್ಯಪಾಲಕ ಅಭಿಯಂತರರು (ವಿದ್ಯುತ್) ಪಶ್ಚಿಮ ವಿಭಾಗ, ಬಿಬಿಎಂಪಿ ರವರ ಅವಗಾಹನೆಗೆ ಸಲ್ಲಿಸಿದೆ.
8. ಸಹಾಯಕ ಕಾರ್ಯನಿರ್ವಾಹಕ ಅಭಿಯಂತರರು & ಸಹಾಯಕ ಅಭಿಯಂತರರು (BWSSB) ರವರ ಅವಗಾಹನೆಗೆ ಸಲ್ಲಿಸಿದೆ.
9. ಸಹಾಯಕ ಕಾರ್ಯನಿರ್ವಾಹಕ ಅಭಿಯಂತರರು & ಸಹಾಯಕ ಅಭಿಯಂತರರು (BESCOM) ರವರ ಅವಗಾಹನೆಗೆ ಸಲ್ಲಿಸಿದೆ.
10. ಸಹಾಯಕ ಕಾರ್ಯನಿರ್ವಾಹಕ ಅಭಿಯಂತರರು, ಬೃಹತ್ ರಾಜಕಾಲುವೆ (SWD) ಪಶ್ಚಿಮ ವಲಯ ರವರ ಅವಗಾಹನೆಗೆ ಮತ್ತು ಮುಂದಿನ ಸೂಕ್ತ ಕ್ರಮಕ್ಕಾಗಿ ಸಲ್ಲಿಸಿದೆ.
11. ಆರೋಗ್ಯ ವೈದ್ಯಾಧಿಕಾರಿ, ಚಿಕ್ಕಪೇಟೆ ವಲಯ ರವರ ಅವಗಾಹನೆಗೆ ಸಲ್ಲಿಸಿದೆ.
12. ಸಹಾಯಕ ಕಾರ್ಯನಿರ್ವಾಹಕ ಅಭಿಯಂತರರು (ಘನತ್ಯಾಜ್ಯ ನಿರ್ವಹಣೆ) ರವರಿಗೆ ಸಭೆಗೆ ಹಾಜರಾಗಲು ತಿಳಿಸಿದೆ.
13. ಸಹ ಕಂದಾಯ ಅಧಿಕಾರಿ, ಚಾಮರಾಜಪೇಟೆ ಉಪವಿಭಾಗ ರವರ ಮುಂದಿನ ಸೂಕ್ತ ಕ್ರಮಕ್ಕಾಗಿ ಸಲ್ಲಿಸಿದೆ
14. ಪೊಲೀಸ್ಇನ್ಸ್‌ಪೆಕ್ಟರ್, ಕಾನೂನು ಮತ್ತು ಸುವ್ಯವಸ್ಥೆ, ಕಾಟನ್‌ಪೇಟೆ ಪೊಲೀಸ್ ಠಾಣೆ, ಬೆಂಗಳೂರು ರವರ ಮಾಹಿತಿಗಾಗಿ ಸಲ್ಲಿಸಿದೆ.
15. ಆರಕ್ಷಕ ನಿರೀಕ್ಷಕರು, ಉಪ್ಪಾರ್‌ಪೇಟೆ ಸಂಚಾರಿ ವಿಭಾಗ, ಬೆಂಗಳೂರು ರವರ ಮಾಹಿತಿಗಾಗಿ ಸಲ್ಲಿಸಿದೆ.
16. ವಾರ್ಡ್ ಸಂಖ್ಯೆ: 109 ಚಿಕ್ಕಪೇಟೆ ವಾರ್ಡ್ ಕಮಿಟಿ ಸದಸ್ಯರು ರವರುಗಳಿಗೆ ಸಭೆಗೆ ಹಾಜರಾಗಲು ತಿಳಿಸಿದೆ.

Scanned by CamScanner